ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/35/ಸಿಡಿಸಿ(1)/2021-22/977

ಆಯುಕ್ತರ ಕಛೇರಿ
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿ: 21-12-2021.

**: ಸುತ್ತೋಲೆ :**

ವಿಷಯ:- "ಉದ್ಯಮಿಯಾಗು ಉದ್ಯೋಗ ನೀಡು" ಕಾರ್ಯಗಾರದಲ್ಲಿ ಅಂತಿಮ ವರ್ಷದ ಪದವಿ, ಸ್ನಾತಕೋತ್ತರ ಮತ್ತು ಇತರೆ ವೃತ್ತಿಪರ ಕೋರ್ಸುಗಳ ವಿದ್ಯಾರ್ಥಿಗಳು ಭಾಗವಹಿಸುವ ಕುರಿತು.

ಉಲ್ಲೇಖ:- ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಕೆ ಇಲಾಖೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿ ಪತ್ರ ಸಂಖ್ಯೆ: ಕಉಮಿ/ಡಿಡಿ-3/ಉ.ಉ.ನೀ/144/2021-22, ದಿನಾಂಕ:15/9/2021.

-0-0-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೈಗಾರಿಕಾಭಿವೃದ್ಧಿಯನ್ನು ಪ್ರೋತ್ಸಾಹಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರವು ವಿವಿಧ ಸುಧಾರಣಾ ಕ್ರಮಗಳನ್ನು ವಲಯವಾರು ಕೈಗಾರಿಕಾ ನೀತಿಗಳು, ಸ್ವಯಂ ಉದ್ಯೋಗ ಯೋಜನೆಗಳು ಮತ್ತು ಇತರೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕುರಿತು ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ. ರಾಜ್ಯದಲ್ಲಿನ ಯುವ ಪೀಳಿಗೆಗೆ "ಉದ್ಯಮಿಯಾಗು ಉದ್ಯೋಗ ನೀಡು" ಎಂಬ ಶೀರ್ಷಿಕೆ ಅಡಿಯಲ್ಲಿ ಒಂದು ದಿನದ ಕಾರ್ಯಗಾರವನ್ನು ಆಯೋಜಿಸಿ ಸರ್ಕಾರದ ಯೋಜನೆಗಳ ಎಲ್ಲಾ ಪೂರಕ ಮಾಹಿತಿ ಒದಗಿಸಿ ಸ್ವಯಂ ಉದ್ಯಮ ಸ್ಥಾಪಿಸಲು ಪ್ರೋತ್ಸಾಹಿಸಬೇಕೆಂದು ಮಾನ್ಯ ಭಾರಿ ಮತ್ತು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಸೂಚಿಸಿರುತ್ತಾರೆ.

ರಾಜ್ಯದ ಪದವಿ ಹಾಗೂ ಇತರೆ ವೃತ್ತಿಪರ ಕೋರ್ಸ್ ಗಳ ವಿದ್ಯಾರ್ಥಿಗಳು ಓದು ಮುಗಿದ ನಂತರ ಕೆಲಸ ಅರಸುವ ಬದಲು ಸ್ವಾವಲಂಭಿಯಾಗಿ ಹಲವರಿಗೆ ಉದ್ಯೋಗಾವಕಾಶ ಸೃಷ್ಠಿಸುವಂತಾಗಲು ಪ್ರೋತ್ಸಾಹಿಸುವ ಉದ್ದೇಶದಿಂದ ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಮತ್ತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ರವರ ಉಪಸ್ಥಿತಿಯಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆವತಿಯಿಂದ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ಕರಾವಳಿ ಪ್ರದೇಶದಲ್ಲಿ ಹಾಗೂ ತುಮಕೂರಿನಲ್ಲಿ "ಉದ್ಯಮಿಯಾಗು ಉದ್ಯೋಗ ನೀಡು" ಕಾರ್ಯಗಾರಗಳನ್ನು ವಿವಿಧ ದಿನಾಂಕಗಳಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ.

"ಉದ್ಯಮಿಯಾಗು ಉದ್ಯೋಗ ನೀಡು" ಕಾರ್ಯಗಾರದಲ್ಲಿ ಕೈಗಾರಿಕೆ ಸ್ಥಾಪನೆಗೆ ಇರುವ ಅವಕಾಶಗಳು, ಅಗತ್ಯ ಕೌಶಲ್ಯ, ಪೂರ್ವ ತಯಾರಿ, ಲಭ್ಯವಿರುವ ಸಾಲ ಸೌಲಭ್ಯದ ಕುರಿತು ಮಾಹಿತಿ ನೀಡಿ ಸ್ವಯಂ ಉದ್ಯಮ ಸ್ಥಾಪನೆಗೆ ಪೂರಕವಾಗಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಮತ್ತು ನೀತಿಗಳ ಬಗ್ಗೆ ನುರಿತ ಪರಿಣಿತರಿಂದ ಮಾಹಿತಿ ಮತ್ತು ಮಾರ್ಗದರ್ಶನ ನೀಡಲಾಗುವುದು. ತಜ್ಞರ ಸಲಹೆ ಜೊತೆಗೆ, ಯಶಸ್ವಿ ಯುವ ಕೈಗಾರಿಕೋದ್ಯಮಿಗಳ ಯಶೋಗಾಥೆ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿದೆ.

ಸದರಿ ಕಾರ್ಯಗಾರದಲ್ಲಿ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಪದವಿ ಮತ್ತು ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಅಂತಿಮ ವರ್ಷದ ಆಸಕ್ತ ವಿದ್ಯಾರ್ಥಿಗಳು ಭಾಗವಹಿಸಿ ಈ ಕಾರ್ಯಗಾರ ಸದುಪಯೋಗ ಪಡೆದುಕೊಳ್ಳುವಂತೆ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಗಳ ಪ್ರಾಂಶುಪಾಲರು ಸೂಕ್ತ ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿರ್ದೇಶಕರು.

ಇವರಿಗೆ,

1) ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರಿಗೆ ಸೂಕ್ತ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ:-

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಕೊ.ಸಂ.106, 1ನೇ ಮಹಡಿ, ವಿಕಾಸಸೌಧ, ಡಾ:ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-1. ಇವರ ಮಾಹಿತಿಗಾಗಿ.
2) ಆಯುಕ್ತರ ಆಪ್ತಶಾಖೆಗೆ- ಮಾಹಿತಿಗಾಗಿ.
3) ಇ-ಆಡಳಿತ ವಿಭಾಗಕ್ಕೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.